ಅ) ಇದಕ್ಕಾಗಿ ನಿಗಧಿಪಡಿಸಿರುವ ಶುಲ್ಕವೆಷ್ಟು?

ಇ) ಇದರ ಜೊತೆಗೆ ಮರು ಮಾಪನದ ವ್ಯವಸ್ಥೆಯನ್ನು ಸಹ ಒದಗಿಸಲಾಗುವುದೇ?

ಶ್ರೀ ಹೆಚ್.ಜಿ. ಗೋವಿಂದಗೌಡ (ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :—

ಅ) ಈ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪ್ರತಿಯೊಂದು ಜಿಲ್ಲೆ ಅಥವಾ ತಾಲ್ಲೂಕುಗಳಲ್ಲಿ ಶಿಕ್ಷಣ ಅದಾಲತ್ ಕಾರ್ಯಕ್ರಮ.

45(165) ಶ್ರೀ ರಾಮಲಿಂಗರೆಡ್ಡಿ (ಜಯನಗರ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳಲ್ಲಿನ ಸಮಸ್ಯೆಗಳ ಬಗ್ಗೆ ಹಾಗೂ ಶಿಕ್ಷಕರುಗಳ ಸಮಸ್ಯೆಗಳ ಇತ್ಯರ್ಥಕ್ಕೆ ಪ್ರತಿಯೊಂದು ಜಿಲ್ಲೆ ಅಥವಾ ತಾಲ್ಲೂಕುಗಳಲ್ಲಿ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :—

ಅ) ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿನ ಸಮಸ್ಯೆಗಳ ಬಗ್ಗೆ ಹಾಗೂ ಶಿಕ್ಷಕರುಗಳ ಸಮಸ್ಯೆಗಳ ಇತ್ಯರ್ಥಕ್ಕೆ ಪ್ರತಿಯೊಂದು ಜಿಲ್ಲೆಯಲ್ಲಿಯೂ ಶಿಕ್ಷಣ ಅದಾಲತ್ ಕಾರ್ಯಕ್ರಮವನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ 1998ರ ಅಕ್ಟೋಬರ್ ಮಾಹೆಯಿಂದಲೇ ಪ್ರತಿ ತಿಂಗಳು ಹಮ್ಮಿಕೊಳ್ಳಲಾಗಿದೆ.

ಬೆಂಗಳೂರಿನ ಜಯದೇವ ಹೃದ್ರೋಗ ಸಂಸ್ಥೆ ಹೊಸಕಟ್ಟಡದ ನಿರ್ಮಾಣಕ್ಕೆ ಬಿಡುಗಡೆ ಮಾಡಿದ ಹಣ.

46(166) ಶ್ರೀ ರಾಮಲಿಂಗಾರೆಡ್ಡಿ (ಜಯನಗರ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬೆಂಗಳೂರಿನ ಜಯದೇವ ಹೃದ್ರೋಗ ಸಂಸ್ಥೆಗೆ ಹೊಸ ಕಟ್ಟಡ ನಿರ್ಮಾಣಕ್ಕಾಗಿ 1998-99ರಲ್ಲಿ ಇಲ್ಲಿಯವರೆಗೆ ಸರ್ಕಾರ ಬಿಡುಗಡೆ ಮಾಡಿರುವ ಮೊಬಲಗೆಷ್ಟು?

ಆ) ಈ ಕಟ್ಟಡ ಪೂರ್ಣಗೊಳ್ಳಲು ಬೇಕಾಗುವ ಮೊಬಲಗೆಷ್ಟು?

ಇ) ಸದರಿ ಕಟ್ಟಡವನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಈ) ಈ ಹೊಸ ಕಟ್ಟಡದಲ್ಲಿ ಅವಶ್ಯವಿರುವ ವೈದ್ಯಕೀಯ ಸಲಕರಣೆಗಳು ಇತ್ಯಾದಿಗಳಿಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಮೊಬಲಗೆಷ್ಟು?

ಉ) 1998-99ರಲ್ಲಿ ಕೇಂದ್ರ ಸರ್ಕಾರದಿಂದ ಮೇಲ್ಕಂಡ ಸಂಸ್ಥೆಗೆ ಬಂದಿರುವ ಹಣದ ವಿವರವೆಷ್ಟು?

ಡಾ: ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ರೂ. 13,42,50,000-00

ಆ) ರೂ. 1462 ಲಕ್ಷಗಳು

ಇ) ತಾತ್ಕಾಲಿಕವಾಗಿ ಜುಲೈ 1999ರೋಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

ಈ) ಇಲ್ಲ

ಉ) ಇಲ್ಲ

ಎರಡನೇ ಪ್ರಿಯೂನಿವರ್ಸಿಟಿಯಲ್ಲಿ ರ್ಯಾಂಕ್ ಪದ್ಧತಿಯನ್ನು ರದ್ದುಗೊಳಿಸುವುದು.

47(263) ಶ್ರೀ ರಾಮಲಿಂಗಾರೆಡ್ಡಿ (ಜಯನಗರ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ವೃತ್ತಿ ಶಿಕ್ಷಣ ಕೋರ್ಸ್‌ಗಳಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯ ಅಂಕಗಳನ್ನು ಗಣನೆಗೆ ತೆಗೆದುಕೊಳ್ಳುವುದರಿಂದ ಎರಡನೆ ಪ್ರೀಯೂನಿವರ್ಸಿಟಿಯಲ್ಲಿ ರ್ಯಾಂಕ್ ಪದ್ಧತಿಯನ್ನು ರದ್ದುಗೊಳಿಸಲು ಸರ್ಕಾರದವರು ಪರಿಶೀಲಿಸುವರೇ?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :—

ಅ) ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಎರಡನೇ ಪಿಯುಸಿ ಪರೀಕ್ಷೆಯ ಅಂಕಗಳನ್ನು ಸಹ ಗಣನೆಗೆ ತೆಗೆದುಕೊಳ್ಳುವುದರಿಂದ ರ್ಯಾಂಕ್ ಪದ್ಧತಿಯನ್ನು ರದ್ದುಪಡಿಸುವ ಪ್ರಸ್ತಾವನೆ ಇರುವುದಿಲ್ಲ.